**<u>ದಿನಾಂಕ: 15-11-2021 ರಂದು ಸಾಕ್ಷಿಧಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಂದುವರೆದ ಮುಖ್ಯ ವಿಚಾರಣೆ: ವಾದಿ ಪರ ಶ್ರೀ.ಎನ್.ಎ.ಬಿ ವಕೀಲರಿಂದ</u>**

ನಾನು ಈ ದಾವೆಯಲ್ಲಿ 3 ನೇ ವಾದಿಯಾಗಿದ್ದೇನೆ. ನನ್ನ ಮುಖ್ಯ ವಿಚಾರಣೆಯ ಸಾಕ್ಷಿಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ . ಅದರಲ್ಲಿನ ಸಂಗತಿಗಳೆಲ್ಲ ಸತ್ಯವಿದ್ದು, ಅವುಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ. ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯ ಸಾಕ್ಷ್ಯವನ್ನಾಗಿ ಪರಿಗಣಿಸಬೇಕೆಂದು ಪ್ರಾರ್ಥಿಸುತ್ತೇನೆ.

ದಾವಾ ಆಸ್ತಿಗೆ ಸಂಬಂಧಪಟ್ಟ ಎರಡು ಪಹಣಿಗಳನ್ನು ಹಾಜರು ಮಾಡಿದ್ದು, ಅವುಗಳನ್ನು ಕ್ರಮವಾಗಿ ನಿಪಿ.1 ಮತ್ತು ನಿ.ಪಿ.2 ಎಂದು, ದಾವಾ ಆಸ್ತಿಯ ಕರಾಕರಣೆಯನ್ನು ಹಾಜರು ಮಾಡಿದ್ದು, ನಿ.ಪಿ.3 ಎಂದು, ಎರಡು ಮ್ಯುಟೇಶನ್ ವಹಿಗಳನ್ನು ಹಾಜರು ಮಾಡಿದ್ದು, ನಿ.ಪಿ.4 ಮತ್ತು ನಿ.ಪಿ.5 ಎಂದು ಗುರುತಿಸಲಾಯಿತು.

**(ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದರಿಂದ ಮುಂದೂಡಲಾಯಿತು)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೆ ಸರಿ ಇದೆ
ಎಂದು ಒಪ್ಪಿರುತ್ತಾರೆ.

ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು
ಹಾನಗಲ್

ಸಾಕ್ಷಿದಾರರ ಸಹಿ